All India Radio: Bangalore
National Bulletin In Kannada
04.04.2025 : 13.10hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**ಮುಖ್ಯಾಂಶಗಳು :**

೧. ಆರನೇ ಬಿಮ್‌ಸ್ಟೆಕ್ ಶೃಂಗಸಭೆಯಲ್ಲಿ ೨೧ ಅಂಶಗಳ ಕ್ರಿಯಾಯೋಜನೆ ಪ್ರಸ್ತಾಪಿಸಿದ ಪ್ರಧಾನಿ ನರೇಂದ್ರ ಮೋದಿ

೨. ಲೋಕಸಭೆಯ ಕಲಾಪ ಅನಿರ್ಧಿಷ್ಟಾವಧಿಗೆ ಮುಂದೂಡಿಕೆ

೩. ಬಾಕ್ಸಿಂಗ್ ವಿಶ್ವಕಪ್ ೨೦೨೫; ಫೈನಲ್ ಪ್ರವೇಶಿಸಿದ ಭಾರತೀಯ ಬಾಕ್ಸರ್ ಹಿತೇಶ್

೪. ಐಪಿಎಲ್ ಟಿ-೨೦ ಕ್ರಿಕೆಟ್; ಇಂದು ಮುಂಬೈ ಇಂಡಿಯನ್ಸ್ - ಲಕ್ನೋ ಸೂಪರ್ ಜೈಂಟ್ಸ್ ಮುಖಾಮುಖಿ

*******

ಥೈಲ್ಯಾಂಡ್‌ನ ಬ್ಯಾಂಕಾಕ್‌ನಲ್ಲಿ ನಡೆಯುತ್ತಿರುವ ೬ ನೇ ಬಹುವಲಯ ತಾತ್ರಿಕ ಮತ್ತು ಆರ್ಥಿಕ ಸಹಕಾರಕ್ಕಾಗಿ ಬಂಗಾಳಕೊಲ್ಲಿ ಉಪಕ್ರಮ - ಬಿಮ್‌ಸ್ಟೆಕ್ ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಿದರು. ಈ ವೇಳೆ ಅವರು, ಸಹಕಾರದ ವಿವಿಧ ಅಂಶಗಳನ್ನು ಒಳಗೊಂಡ ೨೧ ಅಂಶಗಳ ಕ್ರಿಯಾ ಯೋಜನೆಯನ್ನು ಪ್ರಸ್ತಾಪಿಸಿದರು. ಬಿಮ್‌ಸ್ಟೆಕ್ ರಾಷ್ಟ್ರಗಳಲ್ಲಿ ವ್ಯವಹಾರವನ್ನು ಹೆಚ್ಚಿಸುವ ಸಮಯ ಬಂದಿದೆ ಎಂದು ಹೇಳಿದ ಅವರು, ಬಿಮ್‌ಸ್ಟೆಕ್ ವಾಣಿಜ್ಯ ಮಂಡಳಿಯ ಸ್ಥಾಪನೆ ಮತ್ತು ಪ್ರತಿ ವರ್ಷ ಬಿಮ್‌ಸ್ಟೆಕ್ ವ್ಯವಹಾರ ಶೃಂಗಸಭೆಯನ್ನು ಆಯೋಜಿಸುವುದಾಗಿ ಘೋಷಿಸಿದರು. ಐಟಿ ಕ್ಷೇತ್ರದ ಶ್ರೀಮಂತ ಸಾಮರ್ಥ್ಯವನ್ನು ಬಳಸಿಕೊಳ್ಳಲು ಮತ್ತು ಬಿಮ್‌ಸ್ಟೆಕ್ ಅನ್ನು ತಾಂತ್ರಿಕವಾಗಿ ಬಲಪಡಿಸಲು ಪ್ರಧಾನಿ ಕರೆ ನೀಡಿದರು. ಮ್ಯಾನ್ಮಾರ್ ಮತ್ತು ಥೈಲ್ಯಾಂಡ್‌ನ ಮೇಲೆ ಪರಿಣಾಮ ಬೀರಿರುವ ಇತ್ತೀಚಿನ ಭೂಕಂಪಗಳು ವಿಪತ್ತು ನಿರ್ವಹಣೆಯ ಕ್ಷೇತ್ರದಲ್ಲಿ ಒಟ್ಟಾಗಿ ಕೆಲಸ ಮಾಡುವ ಅಗತ್ಯವನ್ನು ಒತ್ತಿಹೇಳುತ್ತವೆ ಎಂದ ಅವರು, ಭಾರತದಲ್ಲಿ ವಿಪತ್ತು ನಿರ್ವಹಣೆಗಾಗಿ ಬಿಮ್‌ಸ್ಟೆಕ್ ಶ್ರೇಷ್ಠತಾ ಕೇಂದ್ರವನ್ನು ಸ್ಥಾಪಿಸಲಾಗುವುದು ಎಂದು ಅವರು ಹೇಳಿದರು. ಶೃಂಗಸಭೆಯ ನೇಪಥ್ಯದಲ್ಲಿ, ಪ್ರಧಾನಿ ನರೇಂದ್ರ ಮೋದಿ ಹಲವು ನಾಯಕರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ಸಹ ನಡೆಸಿದರು.

*"ಸಮೃದ್ಧ, ಸ್ಥಿತಿಸ್ಥಾಪಕ ಮತ್ತು ಮುಕ್ತ - ಬಿಮ್‌ಸ್ಟೆಕ್" ಎಂಬುದು ಈ ಬಾರಿಯ ಶೃಂಗಸಭೆಯ ಧ್ಯೇಯವಾಕ್ಯವಾಗಿದೆ. ಶೃಂಗಸಭೆಯಲ್ಲಿ ಬ್ಯಾಂಕಾಕ್ ವಿಷನ್ ೨೦೩೦ ಅನ್ನು ಅಂಗೀಕರಿಸಲಾಗುವುದು. ಬಿಮ್‌ಸ್ಟೆಕ್‌ನ ಭವಿಷ್ಯದ ಹಾದಿಯನ್ನು ರೂಪಿಸಲು ಬಿಮ್‌ಸ್ಟೆಕ್‌ನ ಶ್ರೇಷ್ಠ ವ್ಯಕ್ತಿಗಳ ಗುಂಪಿನ ವರದಿಯನ್ನು ಸಹ ಇದೇ ವೇಳೆ ಅನುಮೋದಿಸಲಾಗುವುದು. ಪ್ರಧಾನಿ ನರೇಂದ್ರ ಮೋದಿ ಎರಡು ದಿನಗಳ ಭೇಟಿಗಾಗಿ ನಿನ್ನೆ ಥೈಲ್ಯಾಂಡ್‌ನ ಬ್ಯಾಂಕಾಕ್ ತಲುಪಿದರು. ಬಳಿಕ ಪ್ರಧಾನಿ, ತಮ್ಮ ಸಹವರ್ತಿ ಪೇಟೊಂಗ್‌ಟಾರ್ನ್ ಶಿನವಾತ್ರ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು. ರಾಜಕೀಯ, ರಕ್ಷಣೆ, ಭದ್ರತೆ, ವ್ಯಾಪಾರ ಮತ್ತು ಹೂಡಿಕೆ ಸೇರಿದಂತೆ ವಿವಿಧ ಕ್ಷೇತ್ರಗಳ ಸಹಕಾರ ಕುರಿತು ಚರ್ಚಿಸಿದ ಅವರು, ಉಭಯ ರಾಷ್ಟ್ರಗಳ ನಡುವಿನ ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಪಡಿಸುವ ಮಾರ್ಗಗಳನ್ನು ಅನ್ವೇಷಿಸಿದರು. ಸಂಪರ್ಕ, ಆರೋಗ್ಯ, ವಿಜ್ಞಾನ ಮತ್ತು ತಂತ್ರಜ್ಞಾನ, ನವೋದ್ಯಮ, ನಾವೀನ್ಯತೆ, ಶಿಕ್ಷಣ, ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಕ್ಷೇತ್ರಗಳಲ್ಲಿ ಸಹಯೋಗಗಳನ್ನು ಹೆಚ್ಚಿಸುವ ಅಗತ್ಯವನ್ನು ಉಭಯ ನಾಯಕರು ಒತ್ತಿ ಹೇಳಿದರು.*

ತಮ್ಮ ಪ್ರವಾಸದ ಎರಡನೇ ಚರಣದಲ್ಲಿ ಪ್ರಧಾನಿ, ಶ್ರೀಲಂಕಾಕ್ಕೆ ಪ್ರಯಾಣಿಸಲಿದ್ದಾರೆ. ಮೂರು ದಿನಗಳ ಭೇಟಿಯ ಸಮಯದಲ್ಲಿ ಅವರು, ಶ್ರೀಲಂಕಾ ಅಧ್ಯಕ್ಷ ಅನುರ ಕುಮಾರ ದಿಸ್ಸಾನಾಯಕೆ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ.

*******

ಲೋಕಸಭೆ ಕಲಾಪವನ್ನು ಇಂದು ಅನಿರ್ದಿಷ್ಟಾವಧಿಗೆ ಮುಂದೂಡಲಾಗಿದೆ. ಸಂಸತ್ತಿನ ಬಜೆಟ್ ಅಧಿವೇಶನದ ಕೊನೆಯ ದಿನವಾದ ಇಂದು ಲೋಕಸಭೆಯಲ್ಲಿ ಭಾರತದ ಮೇಲೆ ಅಮೆರಿಕ ವಿಧಿಸಿರುವ ಪ್ರತಿಸುಂಕ ವಿಷಯದ ಕುರಿತಂತೆ ಕಾಂಗ್ರೆಸ್, ಡಿಎಂಕೆ ಮತ್ತಿತರ ವಿರೋಧ ಪಕ್ಷದ ಸದಸ್ಯರು, ಘೋಷಣೆಗಳನ್ನು ಕೂಗುತ್ತಾ ಸದನದ ಬಾವಿಗಿಳಿದು ಪ್ರತಿಭಟನೆ ನಡೆಸಿದರು. ಮತ್ತೊಂದೆಡೆ, ವಕ್ಫ್ ತಿದ್ದುಪಡಿ ಮಸೂದೆ ಸಂವಿಧಾನದ ಮೇಲಿನ ದಾಳಿ ಎಂಬ ಹಿರಿಯ ಕಾಂಗ್ರೆಸ್ ನಾಯಕಿ ಸೋನಿಯಾ

ಗಾಂಧಿಯವರ ಹೇಳಿಕೆಯನ್ನು ಹಿಂಪಡೆದು, ಕ್ಷಮೆಯಾಚಿಸುವಂತೆ ಆಡಳಿತ ಪಕ್ಷದ ಸದಸ್ಯರು ಒತ್ತಾಯಿಸಿದರು. ಈ ಹಿನ್ನಲೆ ಗದ್ದಲದ ವಾತಾವರಣದ ನಡುವೆ ಪ್ರಶ್ನೋತ್ತರ ಅವಧಿಯನ್ನು ಕೈಗೆತ್ತಿಕೊಳ್ಳಲು ಸಾಧ್ಯವಾಗದ ಹಿನ್ನೆಲೆ ಲೋಕಸಭಾಧ್ಯಕ್ಷ ಓಂ ಬಿರ್ಲಾ ಕಲಾಪವನ್ನು ಮಧ್ಯಾಹ್ನ ೧೨ ಗಂಟೆಯವರೆಗೆ ಮುಂದೂಡಿದರು. ಏತನ್ಮಧ್ಯೆ, ಪಶ್ಚಿಮ ಬಂಗಾಳದಲ್ಲಿ ಶಿಕ್ಷಕರ ನೇಮಕಾತಿ ವಿಷಯದ ಕುರಿತು ಆಡಳಿತ ಪಕ್ಷದ ಸದಸ್ಯರು ಗದ್ದಲ ಎಬ್ಬಿಸಿದ ನಂತರ ರಾಜ್ಯಸಭೆಯನ್ನು ಸಹ ಮಧ್ಯಾಹ್ನ ೧೨ ಗಂಟೆಯವರೆಗೆ ಮುಂದೂಡಲಾಯಿತು. ಸದನ ಇಂದು ಸಭೆ ಸೇರಿದಾಗ, ಬಿಜೆಪಿಯ ಲಕ್ಷ್ಮಿಕಾಂತ್ ಬಾಜಪೇಯಿ ಮಾತನಾಡಿ, ಪಶ್ಚಿಮ ಬಂಗಾಳದಲ್ಲಿ ೨೫ ಸಾವಿರ ಶಿಕ್ಷಕರನ್ನು ವಜಾಗೊಳಿಸಿರುವುದನ್ನು ಎತ್ತಿಹಿಡಿದ ಸುಪ್ರೀಂ ಕೋರ್ಟ್ ನಿರ್ಧಾರವನ್ನು ಉಲ್ಲೇಖಿಸಿದರು. ಶಿಕ್ಷಕರ ನೇಮಕಾತಿ ಅಭಿಯಾನದ ಸಮಯದಲ್ಲಿ, ಮೀಸಲಾತಿ ನೀತಿ ಮತ್ತು ಇತರ ಮಾನದಂಡಗಳನ್ನು ಪಾಲಿಸಲಾಗಿಲ್ಲ ಎಂದು ಅವರು ಆರೋಪಿಸಿದರು. ಟಿಎಂಸಿ ಸಂಸದರ ನಡುವೆ ಮಾತಿನ ಚಕಮಕಿ ನಡೆದು ಗದ್ದಲದ ವಾತಾವರಣ ಸೃಷ್ಟಿಯಾದ ಹಿನ್ನೆಲೆ ಸಭಾಪತಿ ಜಗದೀಪ್ ಧನ್‌ಕರ್ ಸದನವನ್ನು ಮಧ್ಯಾಹ್ನ ೧೨ ಗಂಟೆಯವರೆಗೆ ಮುಂದೂಡಿದರು.

*******

೨೦೨೩ರಲ್ಲಿ ಕೃತಕ ಬುದ್ಧಿಮತ್ತೆ ಕ್ಷೇತ್ರದಲ್ಲಿ ಗಮನಾರ್ಹ ಖಾಸಗಿ ಹೂಡಿಕೆಗಳೊಂದಿಗೆ ಭಾರತ ಜಾಗತಿಕವಾಗಿ ೧೦ ನೇ ಸ್ಥಾನದಲ್ಲಿದೆ. ಯುಎನ್ ವ್ಯಾಪಾರ ಮತ್ತು ಅಭಿವೃದ್ಧಿ ಯುಎನ್‌ಸಿಟಿಎಡಿ ಬಿಡುಗಡೆ ಮಾಡಿದ ೨೦೨೫ ರ ತಂತ್ರಜ್ಞಾನ ಮತ್ತು ನಾವೀನ್ಯತೆ ವರದಿಯ ಪ್ರಕಾರ, ಫ್ರಾಂಟಿಯರ್ ಟೆಕ್ನಾಲಜೀಸ್ ಸೂಚ್ಯಂಕಕ್ಕಾಗಿ ಸಿದ್ಧತೆಯಲ್ಲಿ ೨೦೨೪ ರಲ್ಲಿ ೧೭೦ ರಾಷ್ಟ್ರಗಳಲ್ಲಿ ಭಾರತ ೩೬ ನೇ ಸ್ಥಾನದಲ್ಲಿದೆ, ೨೦೨೨ ರಲ್ಲಿ ಭಾರತ ೪೮ ನೇ ಸ್ಥಾನದಲ್ಲಿತ್ತು. ಚೀನಾ, ಜರ್ಮನಿ, ಭಾರತ, ಬ್ರಿಟನ್ ಮತ್ತು ಅಮೆರಿಕಾ ಕೃತಕ ಬುದ್ಧಿಮತ್ತೆ ಕ್ಷೇತ್ರದಲ್ಲಿ ವೈಜ್ಞಾನಿಕ ಶಕ್ತಿಯನ್ನು ತೋರ್ಪಡಿಸಿವೆ ಎಂದು ವರದಿ ಸೂಚಿಸಿದೆ. ಎಐ ನಲ್ಲಿ ಖಾಸಗಿ ಹೂಡಿಕೆಯ ವಿಷಯದಲ್ಲಿ ಅಮೆರಿಕಾ ವಿಶ್ವದಲ್ಲೇ ಮುಂಚೂಣಿಯಲ್ಲಿದೆ, ೨೦೨೩ ರಲ್ಲಿ ೬೭ ಬಿಲಿಯನ್ ಅಮೆರಿಕಾ ಡಾಲರ್‌ಗಳು ಅಂದರೆ ಜಾಗತಿಕ ಕೃತಕ ಬುದ್ಧಿಮತ್ತೆಯಲ್ಲಿ ಖಾಸಗಿ ಹೂಡಿಕೆಯ ಶೇಕಡ ೭೦ ರಷ್ಟು ಹೂಡಿಕೆಯನ್ನು ಅಮೆರಿಕಾ ಸಾಧಿಸಿದೆ. ಚೀನಾ ೭.೮ ಬಿಲಿಯನ್ ಡಾಲರ್‌ಗಳೊಂದಿಗೆ ಎರಡನೇ ಸ್ಥಾನದಲಿದ್ದರೆ, ಭಾರತ ೧.೪ ಬಿಲಿಯನ್ ಡಾಲರ್‌ಗಳೊಂದಿಗೆ ಹತ್ತನೇ ಸ್ಥಾನದಲ್ಲಿದೆ.

*******

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೊಸ ಸುಂಕಗಳನ್ನು ಹೇರುವುದಾಗಿ ಘೋಷಿಸಿದ ಒಂದು ದಿನದ ನಂತರ ಜಾಗತಿಕ ಷೇರುಪೇಟೆ ಕುಸಿತ ಕಂಡಿದೆ. ಈ ಸುಂಕಗಳು ಅಮೆರಿಕ ಮತ್ತು ವಿದೇಶಗಳಲ್ಲಿ ಬೆಲೆಗಳನ್ನು ಹೆಚ್ಚಿಸುವ ಮತ್ತು ಬೆಳವಣಿಗೆಯ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ. ವಾಲ್ ಸ್ಟ್ರೀಟ್ ಜರ್ನಲ್ ವರದಿ ಪ್ರಕಾರ, ಅಮೆರಿಕದ ಮಾರುಕಟ್ಟೆ ೨.೭ ಟ್ರಿಲಿಯನ್ ಡಾಲರ್ ಮಾರುಕಟ್ಟೆ ಬಂಡವಾಳ ಕಳೆದುಕೊಂಡಿದೆ.

*******

ಉತ್ತರ ಕನ್ನಡ ಜಿಲ್ಲೆಯ ಕಾರವಾರದ ನೌಕಾನೆಲೆಗೆ ನಾಳೆ ಕೇಂದ್ರ ರಕ್ಷಣಾ ಸಚಿವ ರಾಜನಾಥ ಸಿಂಗ್ ಭೇಟಿ ನೀಡಲಿದ್ದಾರೆ. ಐ.ಎನ್.ಎಸ್ ಕದಂಬ ನೌಕಾನೆಲೆಗೆ ಆಗಮಿಸಲಿರುವ ರಕ್ಷಣಾ ಸಚಿವರು, ಇಂಡಿಯನ್ ಓಶಿಯನ್ ಶಿಪ್ 'ಸಾಗರ' ಕ್ಕೆ ಕಾರವಾರದಿಂದ ಚಾಲನೆ ನೀಡಲಿದ್ದಾರೆ. ನಂತರ ಸೀಬರ್ಡ್ ಪ್ರಾಜೆಕ್ಟ್ ನ ವಿವಿಧ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ ಎಂದು ಭಾರತೀಯ ನೌಕಾದಳದ ಪ್ರಕಟಣೆಯಲ್ಲಿ ತಿಳಿಸಿದೆ.

*******

ಬಾಲಿವುಡ್ ಖ್ಯಾತ, ಹಿರಿಯ ನಟ ಹಾಗೂ ನಿರ್ದೇಶಕ ಮನೋಜ್ ಕುಮಾರ್ ಇಂದು ನಿಧನರಾಗಿದ್ದಾರೆ. ಅವರಿಗೆ ೮೭ ವರ್ಷ ವಯಸ್ಸಾಗಿತ್ತು. ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿದ್ದ ಅವರು ಇಂದು ಬೆಳಿಗ್ಗೆ ಮುಂಬೈನ ಕೋಕಿಲಾಬೆನ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಿಸದೆ ಇಹಲೋಕ ತ್ಯಜಿಸಿದ್ದಾರೆ. ಮನೋಜ್ ಕುಮಾರ್ ಅವರು ವಿಶೇಷವಾಗಿ ದೇಶಭಕ್ತಿ ಚಲನಚಿತ್ರಗಳಿಗೆ ಹೆಸರುವಾಸಿಯಾಗಿದ್ದರು. ಹೀಗಾಗಿ ಅವರನ್ನು ಭರತ್ ಕುಮಾರ್ ಎಂದೂ ಕರೆಯಲಾಗುತ್ತಿತ್ತು. ಉಪಕಾರ್, ಪೂರ್ವ-ಪಶ್ಚಿಮ್, ಕ್ರಾಂತಿ, ರೋಟಿ-ಕಪ್ಡಾ ಔರ್ ಮಕಾನ್ ಅವರ ಯಶಸ್ವಿ ಚಿತ್ರಗಳು. ಮನೋಜ್ ಕುಮಾರ್ ೭ ಫಿಲ್ಮ್‌ಫೇರ್ ಪ್ರಶಸ್ತಿಗಳನ್ನು ಪಡೆದಿದ್ದಾರೆ. ಮೊದಲ ಫಿಲ್ಮ್‌ಫೇರ್ ಪ್ರಶಸ್ತಿಯನ್ನು ೧೯೬೮ ರಲ್ಲಿ ಉಪಕಾರ್ ಚಿತ್ರಕ್ಕಾಗಿ ನೀಡಲಾಯಿತು. ಉಪಕಾರ್ ಸಿನಿಮಾ ಅತ್ಯುತ್ತಮ ಚಿತ್ರ. ಅತ್ಯುತ್ತಮ ನಿರ್ದೇಶಕ, ಅತ್ಯುತ್ತಮ ಕಥೆ ಮತ್ತು ಅತ್ಯುತ್ತಮ ಸಂಭಾಷಣೆಗಾಗಿ ನಾಲ್ಕು

ಫಿಲ್ಮ್‌ಫೇರ್ ಪ್ರಶಸ್ತಿಗಳನ್ನು ಪಡೆದುಕೊಂಡಿದೆ. ಅಲ್ಲದೆ ಮನೋಜ್ ಕುಮಾರ್ ಅವರಿಗೆ ೧೯೯೨ ರಲ್ಲಿ ಪದ್ಮಶ್ರೀ ಪ್ರಶಸ್ತಿ ಹಾಗೂ ೨೦೧೬ ರಲ್ಲಿ ದಾದಾಸಾಹೇಬ್ ಫಾಲ್ಕೆ ಪ್ರಶಸಿ ನೀಡಿ ಗೌರವಿಸಲಾಗಿದೆ. ಅವರ ನಿಧನಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಸಂತಾಪ ಸೂಚಿಸಿದ್ದು, ಭಾರತೀಯ ಚಿತ್ರರಂಗಕ್ಕೆ ಅನನ್ಯ ಕೊಡುಗೆ ನೀಡಿರುವ ಮನೋಜ್ ಕುಮಾರ್ ಅವರು. ದೇಶಭಕ್ತಿ ಸಾರುವ ಚಲನಚಿತ್ರಗಳಿಗೆ ಖ್ಯಾತರಾಗಿದ್ದರು ಎಂದು ಸ್ಮರಿಸಿದ್ದಾರೆ. ಮನೋಜ್ ಕುಮಾರ್ ಭಾರತೀಯ ಚಿತ್ರರಂಗದ ಮೇರು ನಟರಾಗಿದ್ದರು. ದೇಶಭಕ್ತಿಗಾಗಿ ಅವರನ್ನು ಸ್ಮರಿಸಲಾಗುತ್ತದೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ಸಂತಾಪ ಸೂಚಿಸಿದ್ದಾರೆ.  ಮನೋಜ್ ಕುಮಾರ್, ಅವರ ಸಿನಿಮಾ ಪರಂಪರೆ ಹಾಗೂ ಕೃತಿಗಳ ಮೂಲಕ ಜೀವಂತವಾಗಿರುತ್ತಾರೆ. 'ಉಪ್ಕಾರ್' ಮತ್ತು 'ಪುರಬ್ ಮತ್ತು ಪಶ್ಚಿಮ್' ನಂತಹ ಚಲನಚಿತ್ರಗಳಲ್ಲಿ ಅವರ ಅವಿಸ್ಮರಣೀಯ ಅಭಿನಯ ಭಾರತೀಯ ಸಂಸ್ಕೃತಿಯನ್ನು ಶ್ರೀಮಂತಗೊಳಿಸಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

*******

ಬ್ರೆಜಿಲ್‌ನ ಫೋಜ್‌ಡೊ ಇಗುವಾಸುದಲ್ಲಿ ಇಂದು ನಡೆಯಲಿರುವ ಬಾಕ್ಸಿಂಗ್ ವಿಶ್ವಕಪ್ ೨೦೨೫ ಫೈನಲ್‌ಗೆ ಭಾರತೀಯ ಬಾಕ್ಸರ್ ಹಿತೇಶ್ ಪ್ರವೇಶಿಸಿದ್ದಾರೆ. ಆ ಮೂಲಕ ಪ್ರತಿಷ್ಠಿತ ಬಾಕ್ಸಿಂಗ್ ಟೂರ್ನಿಯ ಫೈನಲ್ ಪ್ರವೇಶಿಸಿದ ಮೊದಲ ಭಾರತೀಯ ಬಾಕ್ಸರ್ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಪುರುಷರ ೭೦ ಕೆಜಿ ವಿಭಾಗದ ಸೆಮಿಫೈನಲ್‌ನಲ್ಲಿ ಹಿತೇಶ್ ಫ್ರಾನ್ಸ್‌ನ ಮಕಾನ್ ಟ್ರೊರೆ ಅವರನ್ನು ೫-೦ ಅಂತರದಿಂದ ಸೋಲಿಸಿದರು. ಏತನ್ಮಧ್ಯೆ, ೫೦ ಕೆಜಿ ವಿಭಾಗದಲ್ಲಿ ಭಾರತದ ಜಾದುಮಣಿ ಸಿಂಗ್, ೬೦ ಕೆಜಿ ವಿಭಾಗದಲ್ಲಿ ಸಚಿನ್ ಸಿವಾಚ್ ಮತ್ತು ೯೦ ಕೆಜಿ ವಿಭಾಗದಲ್ಲಿ ವಿಶಾಲ್ ಕಂಚಿನ ಪದಕ ಗೆದ್ದರು.

*******

ಉತ್ತರ ಪ್ರದೇಶದ ಏಕನಾ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಹಾಗೂ ಲಕ್ನೋ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭.೩೦ಕ್ಕೆ ಆರಂಭವಾಗಲಿದೆ.  ಕೊಲ್ಕೊತ್ತಾದ ಈಡನ್ ಗಾರ್ಡನ್ಸ್ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಇಂಡಿಯನ್ ಪ್ರೀಮಿಯರ್ ಲೀಗ್ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧ ಕೊಲ್ಕತ್ತಾ ನೈಟ್‌ರೈಡರ್ಸ್ ೮೦ ರನ್‌ಗಳ ಭರ್ಜರಿ ಜಯ ಸಾಧಿಸಿದೆ.

****END***